# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ದಕ್ಷಿಣ ಕನ್ನಡ ಜಿಲ್ಲಾ ಪಂಚಾಯತಿ ವ್ಯಾಪ್ತಿಯ ಸಾಮಾಜಿಕ ಅರಣ್ಯ ಇಲಾಖೆಯಲ್ಲಿ ತೆರವಾಗಿದ್ದ ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿ/ ವಲಯ ಅರಣ್ಯಾಧಿಕಾರಿ ಹುದ್ದೆಗಳು ಭರ್ತಿಯಾದ್ದರಿಂದ ಪ್ರಸಕ್ತ ಸಾಲಿನ ವೇತನವನ್ನು ಸೆಳೆಯಲು ಕೊರತೆಯಾಗಿರುವ ಅನುದಾನವನ್ನು ಬಿಡುಗಡೆಗೊಳಿಸುವ ಬಗ್ಗೆ.

**ಓದಲಾಗಿದೆ:**

1. ಸುತ್ತೋಲೆ ಸಂಖ್ಯೆ: ಆಇ 01 ಜಿಪಅ 2014 ದಿನಾಂಕ:1.2.2014
2. ಆರ್ಥಿಕ ಇಲಾಖೆ ವೆಚ್ಚ 5 ಶಾಖೆಯ ಇ-ಆಫೀಸ್ ಕಡತ ಸಂಖ್ಯೆ: ಆಇ 428 ವೆಚ್ಚ 5/2020

**ಪ್ರಸ್ತಾವನೆ:**

ದಕ್ಷಿಣ ಕನ್ನಡ ಜಿಲ್ಲಾ ಪಂಚಾಯತ್ ವ್ಯಾಪ್ತಿಯ ಸಾಮಾಜಿಕ ಅರಣ್ಯ ಇಲಾಖೆಯಲ್ಲಿ ತೆರವಾಗಿದ್ದ ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿ ಮತ್ತು ವಲಯ ಅರಣ್ಯಾಧಿಕಾರಿ ಹುದ್ದೆಗಳು ಜುಲೈ 2020ರಲ್ಲಿ ಭರ್ತಿಯಾದ್ದರಿಂದ 2020-21ನೇ ಸಾಲಿನ ವೇತನ ವೆಚ್ಚಕ್ಕಾಗಿ ರೂ.10.28ಲಕ್ಷಗಳನ್ನು ಹೆಚ್ಚುವರಿಯಾಗಿ ಲೆಕ್ಕ ಶೀರ್ಷಿಕೆ 24061-00-101-0-26-005ರಡಿ ಒದಗಿಸಿ ಬಿಡುಗಡೆಗೊಳಿಸುವಂತೆ ಪ್ರಸ್ತಾವಿಸಿದೆ. ಪರಿಶೀಲಿಸಲಾಗಿ, ಪ್ರಸ್ತಾವನೆಯ ಪತ್ರ ಹಾಗೂ ಲೆಕ್ಕಾಚಾರ ಪಟ್ಟಿಯಲ್ಲಿ ಜುಲೈ 2020 ರಿಂದ ಮಾರ್ಚ್ 2021ರವರೆಗೆ ಲೆಕ್ಕಾಚಾರ ಮಾಡಲಾಗಿದೆ. ಮಾರ್ಚ್ 2021ನೇ ಮಾಹೆಯ ವೇತನವನ್ನು ಪ್ರಸಕ್ತ ಸಾಲಿನಲ್ಲಿ ಸೆಳೆಯಲಾಗುವುದಿಲ್ಲವಾದ್ದರಿಂದ ಒಂದು ಮಾಹೆಗೆ ಅಗತ್ಯವಿರುವ ರೂ.1.08ಲಕ್ಷಗಳನ್ನು ಕಡಿತಗೊಳಿಸಿ ನಿವ್ವಳ ರೂ.9.20ಲಕ್ಷಗಳನ್ನು ಲೆಕ್ಕ ಶೀರ್ಷಿಕೆ 2515-00-196-1-05-300ರಿಂದ ಬಿಡುಗಡೆಗೊಳಿಸಲು ನಿರ್ಣಯಿಸಿ ಕೆಳಕಂಡಂತೆ ಆದೇಶಿಸಿದೆ.

## ಸರ್ಕಾರದ ಆದೇಶ ಸಂಖ್ಯೆ: ಆಇ 351 ವೆಚ್ಚ 6/2020(ಇ) ದಿನಾಂಕ: 28ನೇ ಸೆಪ್ಟೆಂಬರ್ 2020

ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ ಈ ಆದೇಶಕ್ಕೆ ಲಗತ್ತಿಸಿರುವ ಅನುಬಂಧದ ಕಾಲಂ 2ರ ಜಿಲ್ಲಾ ಪಂಚಾಯತಿಗೆ ಕಾಲಂ 3 ಕಾರ್ಯಕ್ರಮದಡಿ ಪ್ರಸಕ್ತ ಸಾಲಿನ ವೇತನ ವೆಚ್ಚಕ್ಕಾಗಿ ಅಗತ್ಯವಿರುವ ಅನುದಾನವನ್ನು ಕಾಲಂ 4ರ ಲೆಕ್ಕ ಶೀರ್ಷಿಕೆಯಡಿ ರೂ9.20ಲಕ್ಷ (ರೂಪಾಯಿ ಒಂಬತ್ತು ಲಕ್ಷದ ಇಪ್ಪತ್ತು ಸಾವಿರಗಳು ಮಾತ್ರ) ಗಳನ್ನು ಬಿಡುಗಡೆಗೊಳಿಸಿದೆ. ಈ ರೀತಿ ಬಿಡುಗಡೆಗೊಳಿಸಿದ ಅನುದಾನವನ್ನು ಮೇಲೆ (1) ರಲ್ಲಿ ಓದಲಾದ ಸುತ್ತೋಲೆಯಲ್ಲಿ ನೀಡಿರುವ ನಿರ್ದೇಶನದಂತೆ ಕ್ರಮವಹಿಸಿ ಬಿಲ್ಲುಗಳ ತೀರುವಳಿಗೆ ಕ್ರಮವಹಿಸತಕ್ಕದ್ದು. ಪ್ರಸ್ತುತ ಪ್ರಕರಣಕ್ಕೆ ಆರ್ಥಿಕ ಇಲಾಖೆ ಮರುಹೊಂದಾಣಿಕೆಗೆ ಸಹಮತಿಸಿದೆ ಎಂದು ಭಾವಿಸತಕ್ಕದ್ದು. (ಸೂಚನೆ: ಬಿಡುಗಡೆಗೊಳಿಸಿರುವ ಅನುದಾನವನ್ನು ನಿಧಿ-2ಕ್ಕೆ ಜಮೆ ಮಾಡಿಕೊಂಡು, ನಂತರ ಸಂಬಂಧಪಟ್ಟ ಜಿಲ್ಲಾ ಪಂಚಾಯತಿ ಮುಖ್ಯಲೆಕ್ಕಾಧಿಕಾರಿಗಳು ಮರು ಹೊಂದಾಣಿಕೆ ಆದೇಶವನ್ನು ಈ ಕೆಳಗಿನ ಅಧಿಕಾರಿಗಳಿಗೆ ಸುತ್ತೋಲೆರನ್ವಯ ಪ್ರಸ್ತಾವನೆ ಆರ್ಥಿಕ ಇಲಾಖೆಗೆ ಸಲ್ಲಿಸಿ ಖಜಾನೆಯಲ್ಲಿ ಅಪ್ ಲೋಡ್ ಮಾಡಿಕೊಳ್ಳುವುದು.)

| ಕ್ರಸಂ | ಜಿಲ್ಲಾ ಪಂಚಾಯತ್ | ಕಾರ್ಯಕ್ರಮದ ಲೆಕ್ಕ ಶೀರ್ಷಿಕೆ | ಲೆಕ್ಕ ಶೀರ್ಷಿಕೆ 2515-00-196-1-05-300ರಡಿ ಬಿಡುಗಡೆಗೊಳಿಸಿದ ಅನುದಾನ (ರೂ.ಲಕ್ಷಗಳಲ್ಲಿ) |
|---|---|---|---|
| 1 | 2 | 3 | 4 |
| 1 | ದಕ್ಷಿಣ ಕನ್ನಡ | 2406-00-101-0-26-005 | 9.20 |
| | ಒಟ್ಟು | | **9.20** |

ಈ ಕಾರ್ಯವನ್ನು ಆದ್ಯತೆಯ ಮೇಲೆ ಕ್ರಮವಹಿಸತಕ್ಕದ್ದು, ಯಾವುದೇ ಹಂತದಲ್ಲಿ ಅಂದರೆ ಜಿಲ್ಲಾ ಪಂಚಾಯತಿ ಅಥವಾ ಅನುಷ್ಠಾನಾಧಿಕಾರಿಗಳ ಹಂತದಲ್ಲಿ ವಿಳಂಬವಾಗಿ ಅನುದಾನ ವ್ಯಪಗತವಾದಲ್ಲಿ ಮತ್ತೊಮ್ಮೆ ಅನುದಾನವನ್ನು ಒದಗಿಸುವುದಿಲ್ಲವೆಂದು ಮತ್ತು ವಿಳಂಬಗೊಳಿಸಿದ ಅಧಿಕಾರಿಗಳ ವಿರುದ್ಧ ನಿಯಮಾನುಸಾರ ಕ್ರಮವಹಿಸಲಾಗುವುದು.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ

1415057601
29.9.2020

(ಪುರುಷೋತ್ತಮ್ ಸಿಂಗ್ ಬಿ.ಹೆಚ್.)
ವಿಶೇಷಾಧಿಕಾರಿ(ಜಿ.ಪಂ.) ಹಾಗೂ ಪದನಿಮಿತ್ತ
ಸರ್ಕಾರದ ಉಪ ಕಾರ್ಯದರ್ಶಿ
ಆರ್ಥಿಕ ಇಲಾಖೆ

1. ಮಹಾಲೇಖಪಾಲರು(ಎ&ಇ), ಲೆಕ್ಕ ಪರಿಶೋಧನೆ 1 & 2, ಕರ್ನಾಟಕ, ಬೆಂಗಳೂರು